<u>All India Radio: Bangalore</u>
<u>National Bulletin In Kannada</u>

08.07.2026 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಪ್ರಧಾನಿ ನರೇಂದ್ರ ಮೋದಿ ಇಂದು ಮೆಲ್ಬರ್ನ್‌ಗೆ ಭೇಟಿ; ವಿವಿಧ ವಲಯಗಳಲ್ಲಿ ಭಾರತ-ಆಸ್ಟ್ರೇಲಿಯಾ ಸಹಕಾರ ವೃದ್ಧಿಯ ಗುರಿ
- ಕೇಂದ್ರ ಕೃಷಿ ಸಚಿವರ ನೇತೃತ್ವದಲ್ಲಿ ಎಲ್ ನಿನೊ ಪರಿಣಾಮದ ಕುರಿತು ನವದೆಹಲಿಯಲ್ಲಿ ಉನ್ನತ ಮಟ್ಟದ ಸಭೆ
- ವಿಮಾನ ನಿಲ್ದಾಣಗಳಲ್ಲಿ ಸ್ವಯಂ ಚಾಲಿತ ಎಕ್ಸ್‌ರೇ ಟ್ರೇ ವ್ಯವಸ್ಥೆ ಅಳವಡಿಕೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಸೂಚನೆ
- ಆನ್‌ಲೈನ್ ಭಯೋತ್ಪಾದನಾ ಜಾಲ ಭೇದಿಸಲು ಎನ್‌ಐಎಯಿಂದ ದೇಶದ ೨೦ ಸ್ಥಳಗಳಲ್ಲಿ ಏಕಕಾಲದಲ್ಲಿ ದಾಳಿ
- ಲನೇ ಖೇಲೋ ಇಂಡಿಯಾ ಯುವ ಕ್ರೀಡಾಕೂಟಕ್ಕೆ ತೆಲಂಗಾಣ ಆತಿಥ್ಯ: ಕೇಂದ್ರ ಸಚಿವ ಮನ್ಸುಖ್ ಮಾಂಡವೀಯ ಘೋಷಣೆ

---

ತಮ್ಮ ಮೂರು ದೇಶಗಳ ಅಧಿಕೃತ ಪ್ರವಾಸದ ಎರಡನೇ ಚರಣದ ಭಾಗವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಮೂರು ದಿನಗಳ ಭೇಟಿಗಾಗಿ ಇಂದು ಆಸ್ಟ್ರೇಲಿಯಾದ ಮೆಲ್ಬೋರ್ನ್ ತಲುಪಿದ್ದಾರೆ.

ಈ ಪ್ರವಾಸದ ವೇಳೆ ಅವರು ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರೊಂದಿಗೆ 'ಮೂರನೇ ಭಾರತ-ಆಸ್ಟ್ರೇಲಿಯಾ ವಾರ್ಷಿಕ ಶೃಂಗಸಭೆ'ಯಲ್ಲಿ ಪಾಲ್ಗೊಳ್ಳಲಿದ್ದಾರೆ. ಉಭಯ ದೇಶಗಳ ಪ್ರಧಾನಿಗಳ ನಡುವೆ ನಡೆಯಲಿರುವ ಈ ದ್ವಿಪಕ್ಷೀಯ ಮಾತುಕತೆಯು ಹಲವು ಪ್ರಮುಖ ವಲಯಗಳಲ್ಲಿ ಪರಸ್ಪರ ಸಹಕಾರವನ್ನು ಮತ್ತಷ್ಟು ವೃದ್ಧಿಸುವ ನಿರೀಕ್ಷೆಯಿದೆ.

ಇದರ ಜೊತೆಗೆ, ಪ್ರಧಾನಿ ನರೇಂದ್ರ ಮೋದಿ ಅವರು 'ಭಾರತ-ಆಸ್ಟ್ರೇಲಿಯಾ ಸಿಇಒಗಳ ವೇದಿಕೆ'ಯಲ್ಲಿ ಭಾಗವಹಿಸಿ, ಎರಡೂ ದೇಶಗಳ ಉನ್ನತ ಉದ್ಯಮಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ಬಳಿಕ, ಭಾರತ-ಆಸ್ಟ್ರೇಲಿಯಾ ಬಾಂಧವ್ಯದ ಪ್ರಬಲ ಶಕ್ತಿಯಾಗಿರುವ ಅಲ್ಲಿನ ಅನಿವಾಸಿ ಭಾರತೀಯ ಸಮುದಾಯದ ಬೃಹತ್ ಸಮಾವೇಶವನ್ನು ಉದ್ದೇಶಿಸಿ ಅವರು ಭಾಷಣ ಮಾಡಲಿದ್ದಾರೆ.

---

ಎಲ್ ನಿನೊದಿಂದ ಉಂಟಾಗಬಹುದಾದ ಸವಾಲುಗಳನ್ನು ಎದುರಿಸಲು ಕೇಂದ್ರ ಸರ್ಕಾರವು ಈ ವರ್ಷದ ಏಪ್ರಿಲ್‌ನಿಂದಲೇ ಅಗತ್ಯ ಸಿದ್ಧತೆಗಳನ್ನು ಆರಂಭಿಸಿದೆ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

ಸಂಭವನೀಯ ಎಲ್ ನಿನೊ ಪರಿಣಾಮದ ಕುರಿತು ಉನ್ನತ ಮಟ್ಟದ ಪರಿಶೀಲನಾ ಸಭೆ ನಡೆಸಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ ನಿನೊ ನಿಗಾ ಘಟಕ, ಬೆಳೆ ಹವಾಮಾನ ವೀಕ್ಷಣಾ ಗುಂಪು, ರಾಜ್ಯ ನಿಯಂತ್ರಣ ಕೊಠಡಿಗಳು ಹಾಗೂ ನೋಡಲ್ ಅಧಿಕಾರಿಗಳ ಮೂಲಕ ಬಿತ್ತನೆ, ಬೆಳೆ ಮತ್ತು ಮಾರುಕಟ್ಟೆ ಪರಿಸ್ಥಿತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಕಳೆದ ಮೂರರಿಂದ ನಾಲ್ಕು ದಿನಗಳಲ್ಲಿ ಹಲವು ರಾಜ್ಯಗಳಲ್ಲಿ ಉತ್ತಮ ಮಳೆಯಾಗಿರುವ ಹಿನ್ನಲೆಯಲ್ಲಿ ಮಳೆ ಕೊರತೆ ಎದುರಿಸುತ್ತಿರುವ ಜಿಲ್ಲೆಗಳ ಸಂಖ್ಯೆ ೨೬೨ರಿಂದ ೧೭ಲಕ್ಕೆ ಇಳಿದಿದೆ ಎಂದು ಸಚಿವರು ಹೇಳಿದರು.

ಕಳೆದ ವರ್ಷ ಇದೇ ಅವಧಿಯಲ್ಲಿ ೪೪೨ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ನಡೆದಿದ್ದರೆ, ನಿನ್ನೆಯವರೆಗೆ ಸುಮಾರು ೩೫೧ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಪೂರ್ಣಗೊಂಡಿದೆ ಎಂದು ಅವರು ಮಾಹಿತಿ ನೀಡಿದರು.

---

ಭಾರೀ ಮಳೆ, ಪ್ರವಾಹ ಪರಿಸ್ಥಿತಿ ಹಾಗೂ ಭೂಕುಸಿತದಿಂದ ಬಾಧಿತವಾಗಿರುವ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ದೂರವಾಣಿ ಮೂಲಕ ಮಾತುಕತೆ ನಡೆಸಿ, ಕೇಂದ್ರ ಸರ್ಕಾರದಿಂದ ಎಲ್ಲ ರೀತಿಯ ನೆರವು ನೀಡುವುದಾಗಿ ಭರವಸೆ ನೀಡಿದ್ದಾರೆ.

ಮಹಾರಾಷ್ಟ್ರದಲ್ಲಿ ಭಾರೀ ಮಳೆ ಮತ್ತು ಪ್ರವಾಹ ಪರಿಸ್ಥಿತಿ ಕುರಿತು ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರೊಂದಿಗೆ ಮಾತನಾಡಿದ ಸಚಿವರು, ಪರಿಸ್ಥಿತಿ ನಿಭಾಯಿಸಲು ಅಗತ್ಯವಿರುವ ಎಲ್ಲ ಸಹಕಾರ ಒದಗಿಸಲಾಗುವುದು ಎಂದು ತಿಳಿಸಿದ್ದಾರೆ.

ಗುಜರಾತ್‌ನಲ್ಲಿ ಭಾರೀ ಮಳೆ ಹಾಗೂ ಜಲಾವೃತ ಪರಿಸ್ಥಿತಿ ಕುರಿತು ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಅವರೊಂದಿಗೂ ಗೃಹ ಸಚಿವರು ಮಾತುಕತೆ ನಡೆಸಿದ್ದು, ರಾಜ್ಯಕ್ಕೆ ಕೇಂದ್ರ ಸರ್ಕಾರದ ಸಂಪೂರ್ಣ ನೆರವು ದೊರೆಯಲಿದೆ ಎಂದು ಭರವಸೆ ನೀಡಿದ್ದಾರೆ.

ವಯನಾಡಿನ ಪರಿಸ್ಥಿತಿಯ ಕುರಿತು ಮಾಹಿತಿ ಪಡೆದ ಸಚಿವ ಅಮಿತ್ ಶಾ, ಪರಿಹಾರ ಮತ್ತು ಪುನರ್ವಸತಿ ಕಾರ್ಯಗಳಿಗೆ ಕೇಂದ್ರ ಸರ್ಕಾರದ ಸಂಪೂರ್ಣ ಬೆಂಬಲವಿರುವುದಾಗಿ ಭರವಸೆ ನೀಡಿದ್ದು, ಘಟನೆಯ ಕುರಿತು ಉನ್ನತ ಮಟ್ಟದ ತನಿಖೆ ನಡೆಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ ಎಂದು ಕೇರಳ ಮುಖ್ಯಮಂತ್ರಿ ವಿ.ಡಿ.ಸತೀಸನ್ ತಿಳಿಸಿದ್ದಾರೆ.

---

ದೇಶದ ಪ್ರಮುಖ ವಿಮಾನ ನಿಲ್ದಾಣಗಳಲ್ಲಿ ಪ್ರಯಾಣಿಕರ ಸೌಲಭ್ಯಗಳು, ಭದ್ರತಾ ವ್ಯವಸ್ಥೆ ಹಾಗೂ ವಲಸೆ ಪ್ರಕ್ರಿಯೆಗಳ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಉನ್ನತ ಮಟ್ಟದ ಪರಿಶೀಲನೆ ನಡೆಸಿದರು.

ಮಾನವ ಸಂಪನ್ಮೂಲ ವೆಚ್ಚ ತಗ್ಗಿಸಲು ದೇಶದ ಎಲ್ಲಾ ವಿಮಾನ ನಿಲ್ದಾಣಗಳಲ್ಲಿ ಹಂತ-ಹಂತವಾಗಿ 'ಸ್ವಯಂಚಾಲಿತ ಎಕ್ಸ್-ರೇ ಟ್ರೇ ರಿಟರ್ನ್ ಸಿಸ್ಟಮ್' ಅಳವಡಿಸುವಂತೆ ಮತ್ತು ಹೊಸ ನಿಲ್ದಾಣಗಳಿಗೂ ಇದನ್ನು ಕಡ್ಡಾಯಗೊಳಿಸಲು ನಿಯಮ ರೂಪಿಸುವಂತೆ ಅಮಿತ್ ಶಾ ನಿರ್ದೇಶಿಸಿದರು.

ಭದ್ರತಾ ಮಾನದಂಡಗಳಿಗೆ ಅನುಗುಣವಾಗಿ, ಅಭಿವೃದ್ಧಿ ಹಂತದಲ್ಲಿರುವ ೨೧ ಮತ್ತು ಇನ್ನುಳಿದ ೪೧ ವಿಮಾನ ನಿಲ್ದಾಣಗಳಲ್ಲಿ ಪ್ರಯಾಣಿಕರ ದಟ್ಟಣೆಯ ಆಧಾರದ ಮೇಲೆ ಆದ್ಯತೆಯ ಮೇರೆಗೆ ಕಾಮಗಾರಿ ಕೈಗೊಳ್ಳಲು ಸೂಚಿಸಲಾಯಿತು.

ಪ್ರಯಾಣಿಕರು ಮತ್ತು ವಿಮಾನಗಳ ಸಂಚಾರಕ್ಕೆ ಅನುಗುಣವಾಗಿ ಏರೋಬ್ರಿಡ್ಜ್‌ಗಳ ಸಂಖ್ಯೆಯನ್ನು ನಿಗದಿಪಡಿಸಲು ಹಾಗೂ ಪ್ರಸ್ತುತ ೧೬ ಪ್ರಮುಖ ನಿಲ್ದಾಣಗಳಲ್ಲಿರುವ 'ಬ್ಯಾಗೇಜ್ ಡ್ರಾಪ್' ಸೌಲಭ್ಯವನ್ನು ದಟ್ಟಣೆ ಹೆಚ್ಚಿರುವ ಇತರ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಗಳಿಗೂ ವಿಸ್ತರಿಸಲು ಸಚಿವಾಲಯಕ್ಕೆ ತಿಳಿಸಲಾಯಿತು. ವಲಸೆ ಪ್ರಕ್ರಿಯೆಯನ್ನು ಸುಗಮಗೊಳಿಸಲು ೨೦೨೮ರ ವೇಳೆಗೆ ಎಲ್ಲಾ ರಾಜ್ಯಗಳ ರಾಜಧಾನಿಗಳಲ್ಲಿ 'ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿಗಳನ್ನು' ಕಾರ್ಯಗತಗೊಳಿಸಲು ಸಚಿವರು ಗಡುವು ನೀಡಿದರು.

---

ಐಸಿಸ್ ಮತ್ತು ಎಕ್ಯೂಐಎಸ್ ಭಯೋತ್ಪಾದನಾ ಸಂಘಟನೆಗಳ ಸಿದ್ಧಾಂತಗಳಿಂದ ಪ್ರೇರಿತರಾಗಿ ಆನ್‌ಲೈನ್ ಮೂಲಕ ಯುವಕರನ್ನು ಉಗ್ರವಾದಕ್ಕೆ ಸೆಳೆಯುತ್ತಿದ್ದ ಜಾಲಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ದಳ ಎನ್‌ಐಎ ಇಂದು ದೇಶದಾದ್ಯಂತ ವ್ಯಾಪಕ ಶೋಧ ಕಾರ್ಯ ನಡೆಸಿದೆ.

ಹಿಂಸಾತ್ಮಕ ಜಿಹಾದ್ ಮೂಲಕ ದೇಶವಿರೋಧಿ ಚಟುವಟಿಕೆ ನಡೆಸಲು ಸಂಚು ರೂಪಿಸಿದ್ದ ಆರೋಪದ ಹಿನ್ನೆಲೆಯಲ್ಲಿ ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ ಮತ್ತು ದೆಹಲಿ ಸೇರಿದಂತೆ ಒಟ್ಟು ೨೦ ಸ್ಥಳಗಳಲ್ಲಿ ಏಕಕಾಲದಲ್ಲಿ ಈ ದಾಳಿ ನಡೆದಿದೆ.

ಕಾರ್ಯಾಚರಣೆಯ ವೇಳೆ ಪ್ರಮುಖ ಡಿಜಿಟಲ್ ಉಪಕರಣಗಳು ಮತ್ತು ಎಲೆಕ್ಟ್ರಾನಿಕ್ ಸಾಧನಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಇವುಗಳನ್ನು ವಿಧಿವಿಜ್ಞಾನ ಪರೀಕ್ಷೆಗೆ ಒಳಪಡಿಸಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಎನ್‌ಐಎ ಇದುವರೆಗೆ ಒಬ್ಬ ಅಪ್ರಾಪ್ತ ಸೇರಿದಂತೆ ಒಟ್ಟು ೧೨ ಜನರನ್ನು ಬಂಧಿಸಿದೆ.

ಮಾರ್ಚ್ ತಿಂಗಳಿನಲ್ಲಿ ವಿಜಯವಾಡ ಪೊಲೀಸರು ಮುಖ್ಯ ಆರೋಪಿ ನಿವಾಸದ ಮೇಲೆ ದಾಳಿ ನಡೆಸಿದಾಗ ಲಭ್ಯವಾದ ಆಕ್ಷೇಪಾರ್ಹ ದಾಖಲೆಗಳ ಆಧಾರದ ಮೇಲೆ, ಪ್ರಕರಣದ ಅಂತರರಾಜ್ಯ ಹಾಗೂ ಅಂತರರಾಷ್ಟ್ರೀಯ ಸಂಪರ್ಕಗಳನ್ನು ಭೇದಿಸಲು ಮೇ ತಿಂಗಳಿನಲ್ಲಿ ಎನ್‌ಐಎ ಈ ತನಿಖೆಯನ್ನು ಕೈಗೆತ್ತಿಕೊಂಡಿತ್ತು. ಬಂಧಿತರು ವಿದೇಶಿ ಹ್ಯಾಂಡ್ಲರ್‌ಗಳೊಂದಿಗೆ ಸಂಪರ್ಕದಲ್ಲಿದ್ದು, ಆನ್‌ಲೈನ್ ವೇದಿಕೆಗಳ ಮೂಲಕ ಉಗ್ರಗಾಮಿ ಸಿದ್ಧಾಂತದ ಪ್ರಚಾರದಲ್ಲಿ ತೊಡಗಿದ್ದರು ಎಂದು ತಿಳಿದುಬಂದಿದ್ದು, ತನಿಖೆ ಮುಂದುವರಿದಿದೆ.

---

೧೯ ಆಸನಗಳ 'ಸರಸ್ ಎಂಕೆ-೨' ವಿಮಾನದ ವಿನ್ಯಾಸ ಹಂತವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ರಾಷ್ಟ್ರೀಯ ಏರೋಸ್ಪೇಸ್ ಪ್ರಯೋಗಾಲಯ-ಎನ್‌ಎಎಲ್‌ಗೆ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಅಭಿನಂದನೆ ಸಲ್ಲಿಸಿದ್ದಾರೆ.

ದೇಶದ ಮೊದಲ ಸ್ವದೇಶಿ ಲಘು ಸಾರಿಗೆ ವಿಮಾನವಾಗಿರುವ ಇದು ಪ್ರಧಾನಿ ನರೇಂದ್ರ ಮೋದಿಯವರ 'ಆತ್ಮನಿರ್ಭರ ಭಾರತ' ದೃಷ್ಟಿಕೋನವನ್ನು ಬಲಪಡಿಸಲಿದ್ದು, 'ಮೇಡ್ ಇನ್

ಇಂಡಿಯಾ’ ವಿಮಾನಗಳ ಮೂಲಕ ದೂರದ ವಾಯುನೆಲೆಗಳನ್ನು ಸಂಪರ್ಕಿಸುವ ‘ಉಡಾನ್’ ಯೋಜನೆಗೆ ವೇಗ ನೀಡಲಿದೆ ಎಂದು ಅವರು ತಿಳಿಸಿದ್ದಾರೆ.

ಮತ್ತೊಂದು ಪ್ರಮುಖ ಮೂಲಸೌಕರ್ಯ ಯೋಜನೆಯನ್ನು ಪ್ರಕಟಿಸಿದ ಸಚಿವರು, ವಾರಣಾಸಿ ವಿಮಾನ ನಿಲ್ದಾಣದ ನೂತನ ಟರ್ಮಿನಲ್‌ನಲ್ಲಿ ಸಕ್ರಿಯ ರನ್‌ವೇ ಅಡಿಯಲ್ಲಿ ದೇಶದ ಮೊದಲ ಷಟ್ಪಥ ಕೆಳಸೇತುವೆ ಕಾಮಗಾರಿ ಪ್ರಗತಿಯಲ್ಲಿದೆ ಎಂದು ಹೇಳಿದ್ದಾರೆ. ೪೫೦ ಮೀಟರ್ ಉದ್ದದ ಈ ಕೆಳಸೇತುವೆ ಮೇಲ್ಭಾಗದಲ್ಲಿ ವಿಮಾನಗಳು ಚಲಿಸುತ್ತಿದ್ದರೂ ಕೆಳಭಾಗದಲ್ಲಿ ರಸ್ತೆ ಸಂಚಾರವು ಯಾವುದೇ ಅಡೆತಡೆಯಿಲ್ಲದೆ ಸುಗಮವಾಗಿ ಸಾಗಲು ಅನುವು ಮಾಡಿಕೊಡುತ್ತದೆ ಎಂದು ತಿಳಿಸಿದ್ದಾರೆ.

---

ಪಶ್ಚಿಮ ಏಷ್ಯಾ ಹಾಗೂ ಗಲ್ಫ್ ದೇಶಗಳಲ್ಲಿ ವ್ಯಾಸಂಗ ಮಾಡುತ್ತಿರುವ ಸಿಬಿಎಸ್‌ಇ ೧೨ನೇ ತರಗತಿ ವಿದ್ಯಾರ್ಥಿಗಳಿಗೆ ಕೃಪಾಂಕ ನೀಡುವುದು ಸೇರಿದಂತೆ ವಿವಿಧ ಪರಿಹಾರಗಳನ್ನು ಕೋರಿ ಸಲ್ಲಿಕೆಯಾಗಿದ್ದ ರಿಟ್ ಅರ್ಜಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಇಂದು ಕೇಂದ್ರ ಸರ್ಕಾರ ಹಾಗೂ ಸಿಬಿಎಸ್‌ಇಗೆ ನೋಟಿಸ್ ಜಾರಿ ಮಾಡಿದೆ.

ನ್ಯಾಯಮೂರ್ತಿಗಳಾದ ಕೆ.ವಿ. ವಿಶ್ವನಾಥನ್ ಮತ್ತು ಅಲೋಕ್ ಅರಾಧೆ ಅವರನ್ನೊಳಗೊಂಡ ಪೀಠ ಈ ಆದೇಶ ನೀಡಿದೆ. ೨೦೨೬ರ ಬೋರ್ಡ್ ಪರೀಕ್ಷೆಯ ಅವಧಿಯಲ್ಲಿ ಪ್ರಾದೇಶಿಕ ಯುದ್ಧದ ಹಿನ್ನೆಲೆಯಲ್ಲಿ ಉಂಟಾದ ತೀವ್ರ ವ್ಯತ್ಯಯಗಳು ಹಾಗೂ ಮಾನಸಿಕ ಒತ್ತಡದಿಂದಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ವರ್ಷ ನಷ್ಟವಾಗದಂತೆ ರಕ್ಷಿಸಲು ಸರ್ವೋಚ್ಚ ನ್ಯಾಯಾಲಯದ ತುರ್ತು ಹಸ್ತಕ್ಷೇಪವನ್ನು ಅರ್ಜಿಯಲ್ಲಿ ಕೋರಲಾಗಿದೆ.

---

ನವೀಕರಿಸಬಹುದಾದ ಇಂಧನ ಖಾತೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಇಂದು ಭಾರತೀಯ ಮಾನದಂಡಗಳ ಸಂಸ್ಥೆ-ಬಿಐಎಸ್ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸಿ, ಬೆಂಗಳೂರಿನಲ್ಲಿ ನಡೆಯಲಿರುವ ಬ್ರಿಕ್ಸ್ ರಾಷ್ಟ್ರಗಳ ರಾಷ್ಟ್ರೀಯ ಪ್ರಮಾಣೀಕರಣ ಸಂಸ್ಥೆಗಳ ಮುಖ್ಯಸ್ಥರ ಸಭೆಯ ಸಿದ್ಧತೆಗಳನ್ನು ಅವಲೋಕಿಸಿದರು.

---

ಪ್ರಸಕ್ತ ೨೦೨೩ರ ೬ನೇ ಆವೃತ್ತಿಯ ಖೇಲೋ ಇಂಡಿಯಾ ಯುವ ಕ್ರೀಡಾಕೂಟಕ್ಕೆ ತೆಲಂಗಾಣ ಆತಿಥ್ಯ ವಹಿಸಲಿದೆ ಎಂದು ಕೇಂದ್ರ ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ ಇಂದು ಅಧಿಕೃತವಾಗಿ ಪ್ರಕಟಿಸಿದ್ದಾರೆ.

ಈ ಕ್ರೀಡಾಕೂಟ, ದೇಶದ ಯುವಕರು ತಮ್ಮ ಕ್ರೀಡಾ ಪ್ರತಿಭೆಯನ್ನು ಪ್ರದರ್ಶಿಸಲು ಮತ್ತೊಂದು ಅತ್ಯುತ್ತಮ ವೇದಿಕೆಯನ್ನು ಕಲ್ಪಿಸಿಕೊಡಲಿದೆ. ದೇಶದ ಗ್ರಾಮೀಣ ಹಾಗೂ ತಳಮಟ್ಟದ ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ, ಪ್ರೋತ್ಸಾಹಿಸುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ಪರಿಕಲ್ಪನೆಯೊಂದಿಗೆ ಈ ಕ್ರೀಡಾ ಉಪಕ್ರಮವನ್ನು ಮುನ್ನಡೆಸಲಾಗುತ್ತಿದೆ ಎಂದು ಕೇಂದ್ರ ಸಚಿವರು ತಿಳಿಸಿದ್ದಾರೆ.

__________ ಮುಕ್ತಾಯ ___________